**<u>ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಮಧು .ಜಿ. ಮಾದೇಗೌಡ, ಶ್ರೀ ಶಶೀಲ್ .ಜಿ. ನಮೋಶಿ ಹಾಗೂ ಶ್ರೀ ಎಸ್.ವಿ. ಸಂಕನೂರ ಇವರು ಮಂಡಿಸಿರುವ ನಿಯಮ-330ಕ್ಕೆ ಉತ್ತರಿಸುವ ಬಗ್ಗೆ.</u>**

**ವಿಷಯ:-**

ಪ್ರತಿ ತಾಲ್ಲೂಕಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳನ್ನು ಕಡಿಮೆ ಮಾಡಲು ಹಾಗೂ ಯಾವುದೇ ಅನುಭವ ತರಬೇತಿ ಇಲ್ಲದ ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳಿಂದ ಪರೀಕ್ಷೆ ನಡೆಸಲು ಉದ್ದೇಶಿಸಿರುವುದರಿಂದ ವಿದ್ಯಾರ್ಥಿಗಳ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವುದಲ್ಲದೆ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಭಾರವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ಮೇಲುಸ್ತುವಾರಿಗೆ ನೀಡುವುದರಿಂದ ಉದ್ಭವಿಸುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

**ಉತ್ತರ:**

ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳನ್ನು ರಚಿಸಿ ಮಂಡಲಿಗೆ ಸಲ್ಲಿಸುವಂತೆ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರಿಗೆ ಸೂಚನೆ ನೀಡಲಾಗಿತ್ತು. ಅದರಂತೆ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ)ರವರು ಪರೀಕ್ಷಾ ಕೇಂದ್ರಗಳ ಪಟ್ಟಿಯನ್ನು ಮಂಡಲಿಗೆ ಸಲ್ಲಿಸಿರುತ್ತಾರೆ. ಮಂಡಲಿ ಹಂತದಲ್ಲಿ ಪರಿಶೀಲಿಸಿ ಅಂತಿಮಗೊಳಿಸಬೇಕಾಗಿದ್ದು, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಲಾಗುವುದು.

ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳಿಂದ ಪರೀಕ್ಷೆ ನಡೆಸುವ ಯಾವುದೇ ಪ್ರಸ್ತಾವನೆಯು ಮಂಡಲಿಯ ಮುಂದೆ ಇರುವುದಿಲ್ಲ.

ಮುಂದುವರೆದು, ಶಾಲಾ ಶಿಕ್ಷಣ ಇಲಾಖೆಯ (ಪದವಿಪೂರ್ವ) ಯಲ್ಲಿನ ಜಿಲ್ಲಾಮಟ್ಟದಲ್ಲಿನ ಕಛೇರಿಯ ದೈನಂದಿನ ಕಾರ್ಯನಿರ್ವಹಣೆಯನ್ನು ಪರಿಣಾಮಕಾರಿಯಾಗಿ ಮೇಲುಸ್ತುವಾರಿ ಮಾಡುವ ಅವಶ್ಯಕತೆ ಇರುವುದರಿಂದ ದಿನಾಂಕ: 18.10.2023 ರಂದು ಸುತ್ತೋಲೆ ಸಂಖ್ಯೆ: ಇಪಿ 67 ಟಿಪಿಯು 2023ರಲ್ಲಿ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಜಿಲ್ಲಾ ಉಪ ನಿರ್ದೇಶಕರುಗಳ ಕಾರ್ಯವನ್ನು ಸಂಬಂಧಪಟ್ಟ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಸಂಬಂಧಪಟ್ಟ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರ ಮೇಲುಸ್ತುವಾರಿಗೆ ಒಳಪಡಿಸಲಾಗಿರುತ್ತದೆ. ಇದರಿಂದ ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಯಾವುದೇ ಅಡ್ಡಿ ಉಂಟಾಗಿರುವುದಿಲ್ಲ.

**ಸಂಖ್ಯೆ: ಇಪಿ 257 ಎಸ್ಎಲ್‌ಬಿ 2023**

**(ಎಸ್. ಮಧು ಬಂಗಾರಪ್ಪ )**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**